ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈತ್ರಿ ಯೋಜನೆಯಡಿ ನೀಡಲಾಗುತ್ತಿರುವ ಮಾಸಾಶನವನ್ನು ರೂ.800/- ರಿಂದ ರೂ.1200/-ರವರೆಗೆ ಹೆಚ್ಚಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 95 ಡಿಎಸ್‌ಪಿ 2013, ಬೆಂಗಳೂರು, ದಿನಾಂಕ : 01/8/2013.
2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 95 ಡಿಎಸ್‌ಪಿ 2013, ಬೆಂಗಳೂರು, ದಿನಾಂಕ : 05/8/2014.
3. ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 47 ಡಿಎಸ್‌ಪಿ 2018, ದಿನಾಂಕ :16/03/2018.
4. ಸರ್ಕಾರದ ಆದೇಶ ಸಂಖ್ಯೆ:ಡಿಎಸ್‌ಪಿ/ಒಎಪಿ/7/ 2022, ದಿನಾಂಕ :11/04/2022.
5. 2024-25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-155
6. ಆರ್ಥಿಕ ಇಲಾಖೆಯ Budget Advice ದಿನಾಂಕ: 16.04.2024.
7. ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ:RC-DSSPOEST/19/2024, ದಿನಾಂಕ:20.04.2024
8. ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್/108/ಪಿಎಫ್‌ಆರ್/2024, ದಿನಾಂಕ: 24.06.2024.
9. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 649 ವೆಚ್ಚ-7/2024, ದಿನಾಂಕ: 1.07.2024.

~~ ***** ~~

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ, ಸರ್ಕಾರವು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ [ಹಿಜ್ರಾಗಳು / ಕೋಥಿಗಳು / ಜೋಗಪ್ಪಂದಿರು / ಎಫ್ ಟು ಎಂ / ಎಂ ಟು ಎಫ್/ಮಂಗಳ ಮುಖಿಯರು] ಸಹಾಯ ನೀಡುವ ಉದ್ದೇಶದಿಂದ ಬಡತನ ರೇಖೆಗಿಂತ ಕೆಳಗಿರುವ 40 ರಿಂದ 64 ವರ್ಷದೊಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ ಸಾಮಾಜಿಕ ಭದ್ರತೆ ಒದಗಿಸಿ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ರೂ.500/-ಗಳ ಮಾಸಾಶನ ನೀಡಲು ದಿನಾಂಕ:01/08/2013ರಿಂದ ಜಾರಿಗೆ ತಂದು ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನವನ್ನು ಅರ್ಹ ಫಲಾನುಭವಿಗಳಿಗೆ ನೀಡುತ್ತಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರಿ ಆದೇಶದನ್ವಯ, ಬಡತನ ರೇಖೆಗಿಂತ ಕೆಳಗಿರುವ ಲಿಂಗತ್ವ ಅಲ್ಪಸಂಖ್ಯಾತರಿಗೆ ಮಾಸಾಶನ ನೀಡುವ "ಮೈತ್ರಿ" ಯೋಜನೆಯಡಿ ನಿಗಧಿ ಪಡಿಸಿದ ವಯೋಮಿತಿಯನ್ನು 25 ರಿಂದ 65ವರ್ಷದೊಳಗಿರಬೇಕೆಂದು ಆದೇಶಿಸಿದೆ.

G. N. Sneha
6/7/2024

Scanned with OKEN Scanner

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರಿ ಆದೇಶದನ್ವಯ, ಮೈತ್ರಿ ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು ರೂ.500/- ರಿಂದ ರೂ.600/-ಗಳಿಗೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಸರ್ಕಾರಿ ಆದೇಶದನ್ವಯ, ಮೈತ್ರಿ ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು ರೂ.600/- ರಿಂದ ರೂ.800/-ಗಳಿಗೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 155ರಲ್ಲಿ 'ಲಿಂಗತ್ವ ಅಲ್ಪಸಂಖ್ಯಾತರ ಬದುಕನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಮೈತ್ರಿ ಯೋಜನೆಯಡಿ ನೀಡುವ ಮಾಸಾಶನವನ್ನು 800 ರೂಗಳಿಂದ 1,200 ರೂ.ಗಳಿಗೆ ಹೆಚ್ಚಿಸಲಾಗುವುದು' ಎಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿ ಪ್ರಸ್ತುತ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-155ರಲಿಲ ಘೋಷಿಸಿರುವಂತೆ ದಿನಾಂಕ: 16.04.2024ರ ಆರ್ಥಿಕ ಇಲಾಖೆಯ Budget Adviceರಲ್ಲಿ 2235-60-102-1-07-ಮೈತ್ರಿ [116--ಸಾಮಾಜಿಕ ಭದ್ರತೆ ಪಿಂಚಣಿ-234.00 ಲಕ್ಷಗಳು] ಒಟ್ಟು 234 ಲಕ್ಷಗಳು ಈ ಲೆಕ್ಕ ಶೀರ್ಷಿಕೆಯಡಿ ನಿಗದಿಪಡಿಸಿರುವ ಅನುದಾನದಿಂದ ಘೋಷಣೆಯನ್ನು ಅನುಷ್ಠಾನಗೊಳಿಸುವುದು ಎಂದು ಸೂಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (7)ರ ನಿರ್ದೇಶಕರು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ ಇವರ ಏಕ ಕಡತದಲ್ಲಿ 2024-25ನೇ ಸಾಲಿನ ಆಯವ್ಯಯದ ಕಂಡಿಕೆ-155ರಲ್ಲಿ ಘೋಷಿಸಿರುವಂತೆ ಮೈತ್ರಿ ಯೋಜನೆಯಡಿ ಪ್ರಸ್ತುತ ನೀಡಲಾಗುತ್ತಿರುವ ಮಾಸಾಶನದ ಮೊತ್ತವನ್ನು ದಿನಾಂಕ:01/04/2024ರಿಂದ ಜಾರಿಗೆ ಬರುವಂತೆ ರೂ.1200/- ಗಳಿಗೆ ಹೆಚ್ಚಿಸುವ ಕುರಿತು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರ,ಸಂ, (8)ರ ಟಿಪ್ಪಣಿಯಲ್ಲಿ ಯೋಜನಾ ಇಲಾಖೆಯು "2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-155ಕ್ಕೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಮಾರ್ಗಸೂಚಿಯನ್ವಯ ನಿಯಮಾನುಸಾರವಾಗಿ ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವಂತೆ ಯೋಜನಾ ಇಲಾಖೆಯು ಸಹಮತಿಸಿದೆ:.

ಮೇಲೆ ಓದಲಾದ ಕ್ರ.ಸಂ. (9)ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-155ಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅಭಿಪ್ರಾಯ ನೀಡಿದೆ.

"2024-25ನೇ ಸಾಲಿನ ಆಯವ್ಯಯದ ಕಂಡಿಕೆ-155ರಲ್ಲಿ ಘೋಷಿಸಿರುವಂತೆ ಮೈತ್ರಿ ಯೋಜನೆಯಡಿ ಪ್ರಸ್ತುತ ನೀಡಲಾಗುತ್ತಿರುವ ಮಾಸಾಶನದ ಮೊತ್ತವನ್ನು ದಿನಾಂಕ: 01.04.2024ರಿಂದ ಜಾರಿಗೆ ಬರುವಂತೆ ಮಾಸಿಕ ರೂ. 800/-ಗಳಿಂದ ರೂ. 1200/-ಗಳಿಗೆ ಹೆಚ್ಚಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆರ್ಥಿಕ ಇಲಾಖೆಯ ಅ.ಟಿ. ಸಂಖ್ಯೆ: ಆಇ/82-ವೆಚ್ಚ-

G. N. Sneha
6/7/2024

Scanned with OKEN Scanner

7/2024, ದಿನಾಂಕ: 16.04.2024ರಲ್ಲಿ ತಿಳಿಸಿರುವಂತೆ ಲೆಕ್ಕಶೀರ್ಷಿಕೆ "2235-60-102-1-07-116" ರಡಿ ರೂ. 234.00 ಲಕ್ಷಗಳ ಅನುದಾನದಿಂದ ಈ ಘೋಷಣೆಯನ್ನು ಅನುಷ್ಠಾನಗೊಳಿಸುವಂತೆ ತಿಳಿಸಿದೆ ಹಾಗೂ ವರ್ಷಾಂತ್ಯದಲ್ಲಿ ಅನುದಾನ ಕೊರತೆಯಾದಲ್ಲಿ ಹೆಚ್ಚುವರಿ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸುವಂತೆ ಆಡಳಿತ ಇಲಾಖೆಗೆ ತಿಳಿಸಿದೆ".

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ : ಕಂಇ /70/ಕೆಎಟಿ/ಎಸ್ಎಸ್ಪಿ/2024, ಬೆಂಗಳೂರು, ದಿನಾಂಕ :06/7/2024.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 155ರಲ್ಲಿ ಘೋಷಿಸಿರುವಂತೆ, ಮೈತ್ರಿ ಯೋಜನೆಯಡಿ ಪ್ರಸ್ತುತ ನೀಡಲಾಗುತ್ತಿರುವ ಮಾಸಾಶನದ ಮೊತ್ತ ರೂ. 800/-ಗಳಿಂದ ರೂ. 1200/-ಗಳಿಗೆ (ಒಂದು ಸಾವಿರದ ಇನ್ನೂರು ರೂಪಾಯಿಗಳು ಮಾತ್ರ) ಹೆಚ್ಚಿಸಿ ದಿನಾಂಕ: 01.07.2024ರಿಂದ ಜಾರಿಗೆ ಬರುವಂತೆ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ. ಆದುದರಿಂದ, ದಿನಾಂಕ: 01.07.2024ರಿಂದ ಮೈತ್ರಿ ಯೋಜನೆಯಡಿ ನೀಡಲಾಗುವ ಮಾಸಾಶನ ರೂ. 1200/- ಆಗಿರುತ್ತದೆ.

ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಈ ಆದೇಶದಲ್ಲಿ ಹೆಚ್ಚಿಸಿರುವ ಮಾಸಾಶನ ಮೊತ್ತವನ್ನು ವಿತರಿಸಲು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 649 ವೆಚ್ಚ-7/2024, ದಿನಾಂಕ:01-07-2024ರನ್ವಯ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್/108/ಪಿಎಫ್ಆರ್/2024, ದಿನಾಂಕ: 24.06.2024ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ (ವಿಪತ್ತು ನಿರ್ವಹಣೆ) ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
G.N Susheela 6/7/2024
(ಜಿ.ಎನ್.ಸುಶೀಲ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಕೆ.ಎ.ಟಿ., ರಾ.ವಿ.ವೇ
ಮತ್ತು ಡಿ.ಎಸ್.ಎಸ್.ಪಿ)
6/7/24

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸಸೌಧ, ಬೆಂಗಳೂರು ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ಈ ಕಚೇರಿಗೆ ಒದಗಿಸಬೇಕೆಂದು ಕೋರಿದೆ.

Scanned with OKEN Scanner

ಪ್ರತಿ :

1. ಮಹಾಲೇಖಪಾಲರು, [ಲೆಕ್ಕಪತ್ರ & ಲೆಕ್ಕ ತಪಾಸಣೆ], ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌದ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಯ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು [ಆಯವ್ಯಯ & ಸಂಪನ್ಮೂಲ], ವಿಧಾನಸೌಧ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಬೆಳಗಾವಿ / ಕಲಬುರಗಿ ವಿಭಾಗ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ, ಕಂದಾಯ ಭವನ, ಬೆಂಗಳೂರು.
10. ಮಾನ್ಯ ಕಂದಾಯ ಸಚಿವರ ವಿಶೇಷ ಕರ್ತವ್ಯಾಧಿಕಾರಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಜಂಟಿ ಕಾರ್ಯದರ್ಶಿ, [ಸಚಿವ ಸಂಪುಟ ಶಾಖೆ] ವಿಧಾನಸೌದ, ಬೆಂಗಳೂರು.
12. ಆಯುಕ್ತರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್. ಕಟ್ಟಡ, ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
14. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಯೋಜನೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, [ವೆಚ್ಚ-7], ವಿಧಾನಸೌಧ, ಬೆಂಗಳೂರು.
16. ಎಲ್ಲಾ ಉಪವಿಭಾಗಾಧಿಕಾರಿಗಳು / ತಹಸೀಲ್ದಾರ್‌ರು.
17. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
18. ಹೆಚ್ಚುವರಿ ಪ್ರತಿ / ರಕ್ಷಾ ಕಡತ.

ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ಕೆ.ಎ.ಟಿ, ಸಾ.ಭ&ಪಿಂ), ಬಹುಮಹಡಿಗಳ ಕಟ್ಟಡ, ಬೆಂಗಳೂರು.

Scanned with OKEN Scanner